## ಪ್ರಕಟಣೆಗಾಗಿ

## ಸುತ್ತೂರು ಜೆಎಸ್‌ಎಸ್ ಶಾಲೆ ಹಾಗೂ ಉಚಿತ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಅರ್ಜಿ ಆಹ್ವಾನ



ಸುತ್ತೂರು ಶ್ರೀಕ್ಷೇತ್ರದ ಜೆಎಸ್‌ಎಸ್ ಶಾಲೆ ಹಾಗೂ ಉಚಿತ ವಿದ್ಯಾರ್ಥಿ ನಿಲಯದ 2020–21ನೇ ಸಾಲಿನ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 1ರಿಂದ 8ನೇ ತರಗತಿಗಳಿಗೆ ಕನ್ನಡ ಮಾಧ್ಯಮಕ್ಕೆ ಹಾಗೂ 1, 5, 8ನೇ ತರಗತಿಗಳ ಇಂಗ್ಲೀಷ್ ಮಾಧ್ಯಮಕ್ಕೆ ಮಾತ್ರ ಪ್ರವೇಶಕ್ಕೆ ಅವಕಾಶವಿರುತ್ತದೆ. ಕೋವಿಡ್–19 ಕಾರಣದಿಂದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಈ ವರ್ಷ ಯಾವುದೇ ರೀತಿಯ ಲಿಖಿತ ಪ್ರವೇಶ ಪರೀಕ್ಷೆ ಹಾಗೂ ಸಂದರ್ಶನ ಇರುವುದಿಲ್ಲ.

ಗ್ರಾಮಾಂತರ ಪ್ರದೇಶದ ಆರ್ಥಿಕವಾಗಿ ಹಿಂದುಳಿದ ಕೂಲಿ ಕಾರ್ಮಿಕರು, ಕೃಷಿ ಕಾರ್ಮಿಕರು, ಅಶಕ್ತರು, ನಗರಪ್ರದೇಶಗಳಲ್ಲಿರುವ ದಿನಗೂಲಿ ನೌಕರರು ಮುಂತಾದ ಕಡುಬಡ ಕುಟುಂಬಗಳ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ನೀಡಲಾಗುವುದು. ಅರ್ಜಿಗಳನ್ನು 23.9.2020 ರಿಂದ ವಿತರಿಸಲಾಗುತ್ತದೆ. ಅರ್ಜಿಯನ್ನು www.jssonline.org ಹಾಗೂ www.jsskvk.in ವೆಬ್‌ಸೈಟ್‌ನಿಂದ ನೇರವಾಗಿ ಡೌನ್‌ಲೋಡ್ ಮಾಡಿಕೊಳ್ಳಬಹುದು. ದೂರವಾಣಿಯಲ್ಲಿ ಸಂಪರ್ಕಿಸಿದರೆ WhatsApp ಮೂಲಕವೂ ಅರ್ಜಿ ನಮೂನೆಯನ್ನು ಕಳುಹಿಸಿಕೊಡಲಾಗುವುದು. ಸಮೀಪದ ಗ್ರಾಮಗಳವರು ಶಾಲಾ ಕಛೇರಿಯಲ್ಲಿ ಖುದ್ದಾಗಿ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಯ ಜೊತೆಗೆ ಹಿಂದಿನ ತರಗತಿಯ ಅಂಕಪಟ್ಟಿ, ಭಾವಚಿತ್ರ, ವಿದ್ಯಾರ್ಥಿ ಮತ್ತು ಪೋಷಕರ ಆಧಾರ್‌ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸಿ ಅಂಚೆ ಮುಖಾಂತರ ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಸಂಸ್ಥೆಗಳು, ಸುತ್ತೂರು–571129, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಈ ವಿಳಾಸಕ್ಕೆ ಕಳುಹಿಸಬೇಕು. ಇ–ಮೇಲ್ ಮುಖಾಂತರ ಸಲ್ಲಿಸುವವರು sutturujss@gmail.com ಈ ವಿಳಾಸಕ್ಕೆ ರವಾನಿಸಬೇಕು. ನಿಗದಿತ ಶಾಲಾ ಶುಲ್ಕವನ್ನು ಡಿ.ಡಿ. ಅಥವಾ Online ಮೂಲಕ ಪಾವತಿಸುವುದು. ಅರ್ಜಿಯ ಜೊತೆಗೆ ಹಣ ಪಾವತಿಸಿದ ಚಲನ್ನು ಕಳುಹಿಸುವುದು. ಸರ್ಕಾರದ ಮಾರ್ಗಸೂಚಿಯಂತೆ ಸದ್ಯಕ್ಕೆ Online ಮೂಲಕ ತರಗತಿಗಳು ನಡೆಯುತ್ತವೆ. ಮುಂದೆ ಅನುಮತಿ ದೊರೆತ ನಂತರ ಸೂಚನೆಗಳನ್ನು ಪಾಲಿಸಿ ಶಾಲೆ ಮತ್ತು ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ 08221–232653 ಮತ್ತು 7411486938 ಈ ದೂರವಾಣಿಗಳಲ್ಲಿ ಸಂಪರ್ಕಿಸಿ ವಿವರ ಪಡೆಯಬಹುದಾಗಿದೆ.

ಸಹಿ/–

*ಆಡಳಿತಾಧಿಕಾರಿಗಳು*